# ಕುವೆಂಪು ವಿಶ್ವವಿದ್ಯಾಲಯ

ದಿನಾಂಕ:05-05-2026 ರಂದು ಮಂಗಳವಾರ "ಶತಮಾನೋತ್ಸವ ಭವನದ ಹೊಸ ಸಿಂಡಿಕೇಟ್ ಸಭಾಂಗಣ" ಇಲ್ಲಿ ನಡೆದ 178ನೇ "ವಿದ್ಯಾವಿಷಯಕ ಪರಿಷತ್ ಅಸಾಮಾನ್ಯ (ಘಟಿಕೋತ್ಸವ) ಸಭೆ"ಯ ನಡಾವಳಿಗಳು.

**ಹಾಜರಾದ ಸದಸ್ಯರು:**

| | | |
|---|---|---|
| 1. | ಪ್ರೊ. ಶರತ್ ಅನಂತಮೂರ್ತಿ ಕುಲಪತಿಗಳು | ಅಧ್ಯಕ್ಷರು |
| 2. | ಶ್ರೀ ಹೇಮಂತ್ ಎನ್. ಐ.ಎ.ಎಸ್., ಕುಲಸಚಿವರು | ಸದಸ್ಯ ಕಾರ್ಯದರ್ಶಿಗಳು |
| 3. | ಪ್ರೊ. ಆರ್. ತಿಮ್ಮರಾಯಪ್ಪ, ಕುಲಸಚಿವರು (ಮೌಲ್ಯಮಾಪನ) | ಸದಸ್ಯರು |
| 4. | ಡಾ. ಕೇಶವ ಹೆಚ್. ಜಂಟಿ ನಿರ್ದೇಶಕರು | ಸದಸ್ಯರು |
| 5. | ಡಾ. ಸಂಧ್ಯಾ ಕಾವೇರಿ, ಪ್ರಾಂಶುಪಾಲರು | ಸದಸ್ಯರು |
| 6. | ಶ್ರೀ ಉಲ್ಲಾಸ್ ಇ.ಜಿ, ಪ್ರಾಂಶುಪಾಲರು | ಸದಸ್ಯರು |
| 7. | ಡಾ. ಚಿದಾನಂದ ಎನ್.ಕೆ, ಪ್ರಾಂಶುಪಾಲರು | ಸದಸ್ಯರು |
| 8. | ಡಾ. ಎಂ. ವೆಂಕಟೇಶ್, ಪ್ರಾಂಶುಪಾಲರು | ಸದಸ್ಯರು |
| 9. | ಡಾ. ಪ್ರಭಾಕರ್ ಎಸ್. ಮಂಟೂರೆ, ಪ್ರಾಂಶುಪಾಲರು | ಸದಸ್ಯರು |
| 10. | ಡಾ. ರಾಕೇಶ್ ಎಸ್.ಪಿ, ಪ್ರಾಂಶುಪಾಲರು | ಸದಸ್ಯರು |
| 11. | ಡಾ. ಶಿವಕುಮಾರ್ ಜಿ.ಎಸ್, ಪ್ರಾಂಶುಪಾಲರು | ಸದಸ್ಯರು |
| 12. | ಡಾ. ಜಿ.ಎಂ. ಗಣೇಶ್, ಪ್ರಾಂಶುಪಾಲರು | ಸದಸ್ಯರು |
| 13. | ಶ್ರೀ ರಾಜಣ್ಣ ಕೆ. ಎ. ಪ್ರಾಂಶುಪಾಲರು | ಸದಸ್ಯರು |
| 14. | ಪ್ರೊ. ಅಶೋಕ್ ಆರ್. ಲಮಾಣಿ. ಪ್ರಾಧ್ಯಾಪಕರು | ಸದಸ್ಯರು |
| 15. | ಪ್ರೊ. ಜಿ.ಜೆ. ಸತೀಶ್. ಪ್ರಾಧ್ಯಾಪಕರು | ಸದಸ್ಯರು |
| 16. | ಪ್ರೊ. ವರ್ಗೀಸ್ ಪಿ.ಎ. ಪ್ರಾಧ್ಯಾಪಕರು | ಸದಸ್ಯರು |
| 17. | ಪ್ರೊ. ವೆಂಕಟೇಶ್ ಎಸ್. ಪ್ರಾಧ್ಯಾಪಕರು | ಸದಸ್ಯರು |
| 18. | ಪ್ರೊ. ಚಂದ್ರಶೇಖರ್ ಎಸ್, ಡೀನರು, ಕಲಾ ನಿಕಾಯ | ಸದಸ್ಯರು |
| 19. | ಪ್ರೊ. ಗಜಾನನ ಪ್ರಭು ಬಿ, ಡೀನರು, ಶಿಕ್ಷಣ ನಿಕಾಯ | ಸದಸ್ಯರು |
| 20. | ಪ್ರೊ. ರಾಜ ನಾಯಕ, ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ | ಸದಸ್ಯರು |
| 21. | ಪ್ರೊ. ಹೆಚ್.ಎನ್. ರಮೇಶ್, ಡೀನರು, ವಾಣಿಜ್ಯ ನಿಕಾಯ | ಸದಸ್ಯರು |
| 22. | ಡಾ. ಆರ್.ಹೆಚ್. ವಾಲ್ಮೀಕಿ, ಗ್ರಂಥಪಾಲಕರು. (ಪ್ರಭಾರ) | ಸದಸ್ಯರು |
| 23. | ಡಾ. ಜಿ. ಪ್ರಶಾಂತ ನಾಯಕ, ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶಕರು | ಸದಸ್ಯರು |
| 24. | ಪ್ರೊ. ಯೋಗೇಂದ್ರ ಕೆ, ನಿರ್ದೇಶಕರು ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ | ಸದಸ್ಯರು |
| 25. | ಪ್ರೊ. ಗಜಾನನ ಪ್ರಭು ಬಿ, ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್, | ಸದಸ್ಯರು |
| 26. | ಡಾ. ಎನ್ ಡಿ. ವಿರೂಪಾಕ್ಷ, ನಿರ್ದೇಶಕರು ದೈಹಿಕ ಶಿಕ್ಷಣ | ಸದಸ್ಯರು |
| 27. | ಶ್ರೀ ಶ್ರೀಕಾಂತ್ ಕೆ.ಎಸ್. ಹಣಕಾಸು ಅಧಿಕಾರಿಗಳು | ವಿಶೇಷ ಆಹ್ವಾನಿತರು |

**ಗೈರುಹಾಜರಾದ ಸದಸ್ಯರು:**

| | | |
|---|---|---|
| 1. | ಶ್ರೀ ಹೆಚ್.ಡಿ. ತಮ್ಮಯ್ಯ, ಶಾಸಕರು, ಚಿಕ್ಕಮಗಳೂರು ಕ್ಷೇತ್ರ | ಸದಸ್ಯರು |
| 2. | ಶ್ರೀ ಬಿ.ಕೆ. ಸಂಗಮೇಶ್ವರ, ಶಾಸಕರು, ಭದ್ರಾವತಿ | ಸದಸ್ಯರು |
| 3. | ಶ್ರೀ ಡಿ.ಎಸ್. ಅರುಣ್, ಶಾಸಕರು, ಕರ್ನಾಟಕ ವಿಧಾನ ಪರಿಷತ್ | ಸದಸ್ಯರು |
| 4. | ಶ್ರೀ ಸೂರಜ್ ರೇವಣ್ಣ, ಶಾಸಕರು, ಕರ್ನಾಟಕ ವಿಧಾನ ಪರಿಷತ್ | ಸದಸ್ಯರು |
| 5. | ಪ್ರೊ. ನಮ್ರತಾ ಎಂ. ಪ್ರಾಧ್ಯಾಪಕರು | ಸದಸ್ಯರು |

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ

| | | |
|---|---|---|
| 6. | ಡಾ.ಬಿ.ಜಿ. ಚನ್ನಪ್ಪ, ಪ್ರಾಂಶುಪಾಲರು | ಸದಸ್ಯರು |
| 7. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 8. | ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 9. | ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು. | ಸದಸ್ಯರು |
| 10. | ಆಯುಕ್ತರು, ಸಾರ್ವಜನಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು. | ಸದಸ್ಯರು |

**ಪ್ರಸ್ತಾವನೆ:** ಪ್ರಾರಂಭದಲ್ಲಿ ಸಭೆಗೆ ಆಗಮಿಸಿದ ಸದಸ್ಯರುಗಳೆಲ್ಲರಿಗೂ ಮಾನ್ಯ ಕುಲಸಚಿವರು (ಮೌಲ್ಯಮಾಪನ) ಇವರು ಆತ್ಮೀಯವಾಗಿ ಸ್ವಾಗತ ಕೋರಿದರು. ಸರ್ಕಾರದ ಆದೇಶದ ಮೇರೆಗೆ ನೇಮಕಗೊಂಡು ಕುಲಸಚಿವ (ಆಡಳಿತ) ಹುದ್ದೆಯ ಪ್ರಭಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಹೇಮಂತ್.ಎನ್.ಐ.ಎ.ಎಸ್., ಹಾಗೂ ಹಣಕಾಸು ಅಧಿಕಾರಿ (ಪ್ರಭಾರ) ದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಶ್ರೀಕಾಂತ್. ಕೆ.ಎನ್ ಮತ್ತು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ಪ್ರಕರಣ 30(1)(vi) ರನ್ವಯ ಪ್ರಾಂಶುಪಾಲರ ಜೇಷ್ಟತೆಯನುಸಾರ ವಿದ್ಯಾವಿಷಯಕ ಪರಿಷತ್‌ನ ನೂತನ ಸದಸ್ಯರಾಗಿ ನಾಮನಿರ್ದೇಶನಗೊಂಡ ಡಾ. ರಾಜಣ್ಣ. ಕೆ.ಎ, ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕಡೂರು, ಇವರುಗಳನ್ನು ಸ್ವಾಗತಿಸಲಾಯಿತು ಹಾಗೂ ದಿನಾಂಕ:04–03–2024 ರಿಂದ ದಿನಾಂಕ:31–03–2026 ರವರೆಗೆ ಹಾಗೂ ವಿಶ್ವವಿದ್ಯಾಲಯದ ಕುಲಸಚಿವ(ಆಡಳಿತ)ರಾಗಿ ಕಾರ್ಯನಿರ್ವಹಿಸಿ ಸರ್ಕಾರದ ಆದೇಶದನ್ವಯ ವಿಶ್ವವಿದ್ಯಾಲಯದಿಂದ ಬಿಡುಗಡೆ ಹೊಂದಿದ ಶ್ರೀ ಎ.ಎಲ್.ಮಂಜುನಾಥ್.ಕೆ.ಎ.ಎಸ್. (ಸೂಪರ್ ಟೈಮ್ ಸ್ಕೇಲ್) ಇವರಿಗೆ ಅವರ ಅನುಪಸ್ಥಿತಿಯಲ್ಲಿ ಅಭಿನಂದನೆಯನ್ನು ಸಲ್ಲಿಸಲಾಯಿತು.

ಮಾನ್ಯ ಕುಲಪತಿಯವರು ಪ್ರಾಸ್ತಾವಿಕವಾಗಿ ಮಾತನಾಡುತ್ತಾ, ಘನತೆವೆತ್ತ ಕುಲಾಧಿಪತಿಗಳ ಅನುಮೋದನೆ ಮೇರೆಗೆ ವಿಶ್ವವಿದ್ಯಾಲಯದ 35ನೇ ವಾರ್ಷಿಕ ಘಟಿಕೋತ್ಸವವನ್ನು ದಿನಾಂಕ:06–05–2026 ರಂದು ಏರ್ಪಡಿಸಲಾಗಿರುತ್ತದೆ. ವಿಶ್ವವಿದ್ಯಾಲಯದ ಕುಲಾಧಿಪತಿಗಳು ಹಾಗೂ ಘನತೆವೆತ್ತ ರಾಜ್ಯಪಾಲರಾದ ಶ್ರೀ ಥಾವರ್‌ಚಂದ್ ಗೆಹ್ಲೋಟ್‌ರವರು ಅಗ್ರಾಸನ ವಹಿಸಲಿದ್ದು, ಸನ್ಮಾನ್ಯ ಉನ್ನತ ಶಿಕ್ಷಣ ಸಚಿವರೂ ಹಾಗೂ ವಿಶ್ವವಿದ್ಯಾಲಯದ ಸಮಕುಲಾಧಿಪತಿಗಳಾದ ಡಾ. ಎಂ. ಸಿ. ಸುಧಾಕರ್‌ರವರು ಉಪಸ್ಥಿತರಿರುವರು. ಪ್ರೊ. ಅನಿಲ್. ಡಿ. ಸಹಸ್ರಬುಧೆ, ಅಧ್ಯಕ್ಷರು, ರಾಷ್ಟ್ರೀಯ ಶೈಕ್ಷಣಿಕ ತಂತ್ರಜ್ಞಾನ ಫೋರಮ್ ಮತ್ತು ಅಧ್ಯಕ್ಷರು, ರಾಷ್ಟ್ರೀಯ ಮಾನ್ಯತಾ ಮಂಡಳಿ, ಶಿಕ್ಷಣ ಸಚಿವಾಲಯ, ಭಾರತ ಸರ್ಕಾರ ಇವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ಶ್ರೀ ಕೋಣಂದೂರು ಲಿಂಗಪ್ಪ, ಶ್ರೀ ಕೆ.ವಿ.ಅಕ್ಷರ ಮತ್ತು ಪ್ರೊ. ಹೆಚ್.ಎ. ರಂಗನಾಥ್ ಇವರುಗಳಿಗೆ ಗೌರವ ಡಾಕ್ಟರೇಟ್ ಪದವಿಯನ್ನು ಪ್ರಧಾನ ಮಾಡಲಾಗುವುದು. ಘಟಿಕೋತ್ಸವದಲ್ಲಿ ಪಿಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಪದವಿ ಪಡೆಯುವ ಅಭ್ಯರ್ಥಿಗಳ ಪಟ್ಟಿಯ ಅನುಮೋದನೆಗಾಗಿ ವಿದ್ಯಾವಿಷಯಕ ಪರಿಷತ್‌ನ ಅಸಾಮಾನ್ಯ ಸಭೆಯನ್ನು ಕರೆಯಲಾಗಿದ್ದು, ಎಲ್ಲಾ ಸದಸ್ಯರು ಸದರಿ ಪಟ್ಟಿಯನ್ನು ಪರಿಶೀಲಿಸಿ, ಅನುಮೋದಿಸಬೇಕೆಂದು ಹಾಗೂ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಿಕೊಡುವಂತೆ ಕೋರಿದರು.

ಸಭೆಗೆ ಆಗಮಿಸಿದ ಸದಸ್ಯರುಗಳೆಲ್ಲರಿಗೂ ಮಾನ್ಯ ಕುಲಸಚಿವರು ಆತ್ಮೀಯವಾಗಿ ಸ್ವಾಗತ ಕೋರಿದರು.

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577

## ಪರೀಕ್ಷಾ ವಿಭಾಗ

**2026:ಎಸಿ–2.01:** 35ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪದವಿ ಪಡೆಯುವ ಅರ್ಹ ಅಭ್ಯರ್ಥಿಗಳ ಪಟ್ಟಿ ಅನುಮೋದಿಸುವ ಬಗ್ಗೆ.

**ಚರ್ಚೆ:** ಕುಲಸಚಿವ (ಮೌಲ್ಯಮಾಪನ)ರವರು ಮಾತನಾಡುತ್ತಾ, ವಿಶ್ವವಿದ್ಯಾಲಯದ 35ನೇ ವಾರ್ಷಿಕ ಘಟಿಕೋತ್ಸವದಲ್ಲಿ ಮೂವರು ಗಣ್ಯರಿಗೆ ಗೌರವ ಡಾಕ್ಟರೇಟ್ ನೀಡಲು ಘನತೆವೆತ್ತ ಕುಲಾಧಿಪತಿಗಳು ಅನುಮೋದನೆ ನೀಡಿದ್ದಾರೆ ಎಂಬ ಮಾಹಿತಿ ನೀಡುತ್ತಾ, ಘಟಿಕೋತ್ಸವದಲ್ಲಿ ಬಂಗಾರದ ಪದಕ, ನಗದು ಬಹುಮಾನ, ಪಿಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಮುಂತಾದ ಪದವಿಗಳನ್ನು ಪಡೆಯಲು ಅರ್ಹರಾದ ಅಭ್ಯರ್ಥಿಗಳ ಮಾಹಿತಿಯನ್ನು ಸಭೆಗೆ ವಿವರಿಸಿ, ವಿವಿಧ ಪದವಿಗಳಿಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಅನುಮೋದಿಸಲು ಕೋರಿದರು.

**ನಿರ್ಣಯ:** ಚರ್ಚೆ ಹಾಗೂ ಪರಿಶೀಲನೆಯ ನಂತರ 35ನೇ ವಾರ್ಷಿಕ ಘಟಿಕೋತ್ಸವದಲ್ಲಿ ಬಂಗಾರದ ಪದಕ, ನಗದು ಬಹುಮಾನ, ಪಿಹೆಚ್.ಡಿ., ಸ್ನಾತಕೋತ್ತರ ಮತ್ತು ಸ್ನಾತಕ ಮುಂತಾದ ಪದವಿಗಳನ್ನು ಪಡೆಯಲು ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಸಭೆಯು ಅನುಮೋದಿಸಿತು.

ಅಂತಿಮವಾಗಿ ಸಭೆಗೆ ಆಗಮಿಸಿ ಸೂಕ್ತ ಸಲಹೆ, ಸಹಕಾರ ನೀಡಿದ ಎಲ್ಲಾ ಸದಸ್ಯರುಗಳಿಗೆ ಕುಲಸಚಿವರು ಹೃತ್ಪೂರ್ವಕವಾಗಿ ವಂದಿಸಿದ ನಂತರ ಸಭೆಯ ಕಲಾಪಗಳು ಮುಕ್ತಾಯವಾದವು.

ಕುಲಸಚಿವರು

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ

ಸಹಿ/–
**ಕುಲಪತಿಗಳು**